# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 653 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 13.12.2024 |
| ಉತ್ತರಿಸಬೇಕಾದ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಕೃಷಿ ಇಲಾಖೆಯ ಕಛೇರಿಗೆ ಮಂಜೂರಾಗಿರುವ, ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆಯೆಷ್ಟು; | ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಕೃಷಿ ಇಲಾಖೆಯ ಕಛೇರಿಗೆ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ:62 ಹಾಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ:6 ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ:56 |
| ಆ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿಯೇ ಅತೀ ಹೆಚ್ಚು ಕೃಷಿಕರನ್ನು ಹೊಂದಿರುವ ಬೆಳ್ತಂಗಡಿ ತಾಲ್ಲೂಕಿನ ಕೃಷಿ ಇಲಾಖೆಯ ಕಛೇರಿಯಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳ ತೀವ್ರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕಛೇರಿಗೆ ಪೂರ್ಣ ಪ್ರಮಾಣದಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯುಕ್ತಿಗೊಳಿಸಲು ಸರ್ಕಾರ ಕ್ರಮ ವಹಿಸಿದೆಯೇ; | ಬಂದಿದೆ.<br><br>ಕೃಷಿ ಅಧಿಕಾರಿ, ಸಹಾಯಕ ಕೃಷಿ ಅಧಿಕಾರಿ ಮತ್ತು ಪ್ರಥಮ ದರ್ಜೆ ಸಹಾಯಕರ ವೃಂದದಲ್ಲಿ ಕೆಳಕಂಡಂತೆ ನೇರ ನೇಮಕಾತಿ ಕೋಟಾದಡಿ 714 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಅಂತಿಮ ಆಯ್ಕೆ ಪಟ್ಟಿ ಬಂದ ನಂತರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತದೆ.<br><br>**ವೃಂದಗಳು** — **ಹುದ್ದೆಗಳಸಂಖ್ಯೆ**<br>ಕೃಷಿ ಅಧಿಕಾರಿ — 86<br>ಸಹಾಯಕ ಕೃಷಿ ಅಧಿಕಾರಿ — 586<br>ಪ್ರಥಮ ದರ್ಜೆ ಸಹಾಯಕರು — 42<br>**ಒಟ್ಟು** — **714**<br><br>ಹೊರಗುತ್ತಿಗೆ/ಗುತ್ತಿಗೆ ಆಧಾರದ ಮೇಲೆ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆಯಡಿಯಲ್ಲಿ ಸಹಾಯಕ ತಾಂತ್ರಿಕರ ಸೇವೆಯನ್ನು ಹಾಗೂ ಆತ್ಮ ಯೋಜನೆಯಡಿಯಲ್ಲಿ ಉಪಯೋಜನಾ ನಿರ್ದೇಶಕರು, ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು ಮತ್ತು ಸಹಾಯಕ ತಾಂತ್ರಿಕ ವ್ಯವಸ್ಥಾಪಕರ ಸೇವೆಯನ್ನು ಪಡೆಯಲಾಗಿರುತ್ತದೆ. ಪ್ರತಿ ರೈತ ಸಂಪರ್ಕ ಕೇಂದ್ರಕ್ಕೆ ಒಬ್ಬರಂತೆ ದಾಸ್ತಾನು ನಿರ್ವಹಣಾ ಸಿಬ್ಬಂದಿಗಳ ಸೇವೆಯನ್ನು ಹಾಗೂ ಖಾಲಿ ಇರುವ ಹುದ್ದೆಗಳಿಗನುಗುಣವಾಗಿ ಬೆರಳಚ್ಚುಗಾರರು, ವಾಹನ ಚಾಲಕರು, ಗ್ರೂಪ್ ಡಿ ಇವರುಗಳ ಸೇವೆಯನ್ನು ಸಹಬಳಸಿಕೊಂಡು ಸಕಾಲದಲ್ಲಿ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. |

| | | |
|---|---|---|
| ಇ) | ಇಲ್ಲದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸದರಿ ಕಛೇರಿಗೆ ಮಂಜೂರಾಗಿರುವ ಎಲ್ಲಾ ಹುದ್ದೆಗಳಿಗೆ ಪೂರ್ಣಕಾಲಿಕ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡಲಾಗುವುದು? | ಅನ್ವಯಿಸುವುದಿಲ್ಲ. |

No.AGRI/379/AGS/2024

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು